# ಆಯ್ಕೆ ಪ್ರಕ್ರಿಯೆ ವೇಳಾ ಪಟ್ಟಿ.

# (Calender of Events)

| ಕ್ರ.ಸಂ. | ವಿವರಗಳು | ದಿನಾಂಕ |
|---|---|---|
| 1 | ಅಧಿಸೂಚನೆ ಹೊರಡಿಸಿದ ದಿನಾಂಕ | 20-1-2020 |
| 2 | ಅರ್ಜಿ ಸಲ್ಲಿಸಲು ಪ್ರಾರಂಭಿಕ ದಿನಾಂಕ | 22-1-2020 |
| 3 | ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ | 21-2-2020 |
| 4 | ಶುಲ್ಕ ಪಾವತಿಸಲು ಕೊನೆಯ ದಿನಾಂಕ | 25-2-2020 |
| 5 | ತಾತ್ಕಲಿಕ ಪರಿಶೀಲನಾ ಆಯ್ಕೆ ಪಟ್ಟಿಯನ್ನು ಪ್ರಕಟಿಸ ಬೇಕಾದ ದಿನಾಂಕ | 20-3-2020 |
| 6 | ತಾತ್ಕಲಿಕ ಪರಿಶೀಲನಾ ಆಯ್ಕೆ ಪಟ್ಟಿಗೆ ಆಕ್ಷೇಪಣೆ ಗಳನ್ನು ಸಲ್ಲಿಸಲು ನಿಗದಿಪಡಿಸಿದ ದಿನಾಂಕ | 5-4-2020 |
| 7 | ತಾತ್ಕಾಲಿಕ ಪರಿಶೀಲನಾ ಆಯ್ಕೆಪಟ್ಟಿಯಂತೆ ಅಭ್ಯರ್ಥಿಗಳು ಮೂಲ ದಾಖಲಾತಿಗಳನ್ನು ಪರಿಶೀಲಿನೆಗೆ ಜಿಲ್ಲಾಧಿಕಾರಿಗಳ ಕಚೇರಿಗೆ ಹಾಜರಾಗಲು ನಿಗದಿಪಡಿಸಿದ ದಿನಾಂಕ ಮತ್ತು ಸಮಯ | 15-4-2020 |
| 8 | ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಲು ನಿಗದಿ ಪಡಿಸಿದ ದಿನಾಂಕ | 29-4-2020 |
| 9 | ಸ್ಪಷ್ಟೀಕರಣ/ಮಾಹಿತಿಗಾಗಿ ಸಂಪರ್ಕಿಸಬೇಕಾದ ಹೆಲ್ಪ್ ಲೈನ್ | 08194-222538 |
| 10 | ವೆಬ್ ಸೈಟ್ ವಿಳಾಸ | http://chitradurga-va.kar.nic.in |

ಜಿಲ್ಲಾಧಿಕಾರಿಗಳು,
ಚಿತ್ರದುರ್ಗ ಜಿಲ್ಲೆ.

ಕಂದಾಯ ಇಲಾಖೆ

# ಜಿಲ್ಲಾಧಿಕಾರಿಗಳ ಕಾರ್ಯಾಲಯ, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.


ಒನಕೆ ಓಬವ್ವ ವೃತ್ತ
ಚಿತ್ರದುರ್ಗ.

ದೂರವಾಣಿ ಸಂಖ್ಯೆ:222811, 222538
ಫ್ಯಾಕ್ಸ್ ಸಂಖ್ಯೆ: 08194-224355
E-mail:deo.chitradurga@gmail.com


---

ಸಂ:ಗ್ರಾಲೆ:ಸಿಬ್ಬಂದಿ:ಸಿಆರ್-18/2019-20 ದಿನಾಂಕ:20-1-2020

## ಅಧಿಸೂಚನೆ

ವಿಷಯ: ಚಿತ್ರದುರ್ಗ ಜಿಲ್ಲಾ ಕಂದಾಯ ಘಟಕದಲ್ಲಿ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಅಧಿಸೂಚನೆ ಸಂ:ಕಂಇ 299 ಬಿಎಸ್‌ಸಿ 2006 ದಿ:3-2-2009 ಮತ್ತು ದಿ:24-7-2009.
2. ಸರ್ಕಾರದ ಪತ್ರ ಸಂ:ಕಂಇ 4 ಬಿಎಸ್‌ಸಿ 2011 ದಿ:25-2-2011.
3. ಸರ್ಕಾರದ ಅಧಿಸೂಚನೆ ಸಂ:ಸಿಆಸುಇ 54 ಎಸ್‌ಆರ್‌ಆರ್ 2012 ದಿ:23-6-2012.
4. ಸರ್ಕಾರದ ಆದೇಶ ಸಂ:ಕಂಇ 100 ಬಿಎಸ್‌ಸಿ 2011 ದಿ:29-6-2012.

%%%%%%

ಚಿತ್ರದುರ್ಗ ಜಿಲ್ಲಾ ಕಂದಾಯ ಘಟಕದಲ್ಲಿ ವಿವಿಧ ಕಾರಣಗಳಿಂದ ಖಾಲಿ ಇರುವ 59 ಗ್ರಾಮಲೆಕ್ಕಿಗರ ಹುದ್ದೆಗಳನ್ನು ಕರ್ನಾಟಕ ನಾಗರೀಕ ಸೇವೆಗಳು (ರೆವಿನ್ಯೂ ಸಬಾರ್ಡಿನೇಟ್ ಬ್ರಾಂಚ್) ವೃಂದ ಮತ್ತು ನೇಮಕಾತಿ ತಿದ್ದುಪಡಿ ನಿಯಮಗಳು 2008 ಮತ್ತು 2009 ರನ್ವಯ ಹಾಗೂ ಸರ್ಕಾರದ ಉಲೇಖಗಳ ಅಧಿಸೂಚನೆ/ಸುತ್ತೋಲೆಗಳನ್ವಯ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ನಿಗಧಿಪಡಿಸಿದ ನಮೂನೆಯಲ್ಲಿ ಅರ್ಜಿಗಳನ್ನು ಆನ್‌ಲೈನ್ (ON LINE) ಮೂಲಕ ಆಹ್ವಾನಿಸಲಾಗಿದೆ.

**ಹುದ್ದೆಗಳ ಸಂಖ್ಯೆಯನ್ನು ಕಡಿಮೆ ಅಥವಾ ಹೆಚ್ಚು ಮಾಡುವುದಕ್ಕೆ ಜಿಲ್ಲಾಧಿಕಾರಿಗಳಿಗೆ ಮಾತ್ರ ಅಧಿಕಾರವಿರುತ್ತದೆ.**

-2

ಹುದ್ದೆಗಳ ವಿವರ:

| ಕ್ರ.ಸಂ: | ಹುದ್ದೆಯ ಹೆಸರು | ಒಟ್ಟು ಹುದ್ದೆ | ವಿದ್ಯಾರ್ಹತೆ | ವೇತನ ಶ್ರೇಣಿ |
|---|---|---|---|---|
| 1 | ಗ್ರಾಮಲೆಕ್ಕಿಗ | 59 | 1. ದ್ವಿತೀಯ ಪಿ.ಯು.ಸಿ. ಅಥವಾ ಸಿಬಿಎಸ್ಇ/ಐಸಿಎಸ್ಇ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು.ಈ ವಿದ್ಯಾರ್ಹತೆ ಯನ್ನು ಅಧಿಸೂಚನೆ ಹೊರಡಿಸುವ ದಿನಾಂಕಕ್ಕೆ ಮುಂಚಿತವಾಗಿ ಪಡೆದಿರ ತಕ್ಕದ್ದು.<br>2. ಕನ್ನಡ ಭಾಷಾ ಜ್ಞಾನದ ಅವಶ್ಯಕತೆ ಕಡ್ಡಾಯವಾಗಿರುತ್ತದೆ.<br>3. ಕಂಪ್ಯೂಟರ್ ಬಗ್ಗೆ ಸಾಮಾನ್ಯ ಜ್ಞಾನ ಹೊಂದಿರಬೇಕು. | 21400-42000 |

ಮೀಸಲಾತಿ ವರ್ಗೀಕರಣ (ಹಿಂಬಾಕಿ)

| ಕ್ರ ಸಂ: | ಮೀಸಲಾತಿ | ಇತರೆ | ಕನ್ನಡ ಮಾಧ್ಯಮ | ಮಹಿಳೆ | ಯೋಜನಾ ನಿರಾಶ್ರಿತರು | ಗ್ರಾಮೀಣ | ಮಾಜಿ ಸೈನಿಕರು | ಅಂಗವಿಕಲ | ಒಟ್ಟು |
|---|---|---|---|---|---|---|---|---|---|
| 1 | 2 | 3 | 4 | 5 | 6 | 7 | 8 | 9 | 10 |
| 1 | ಪ.ಜಾತಿ | - | - | - | - | - | - | - | - |
| 2 | ಪ.ಪಂ | - | - | - | - | - | - | - | - |
| 3 | ಪ್ರ.ವ-1 | - | - | - | - | - | - | - | - |
| 4 | ಪ್ರವ-2(ಎ) | - | - | - | - | 1 | - | - | 1 |
| 5 | ಪ್ರವ-2(ಬಿ) | - | - | - | - | - | - | - | - |
| 6 | ಪ್ರವ-3(ಎ) | - | - | - | - | - | - | - | - |
| 7 | ಪ್ರವ-3(ಬಿ) | - | - | - | - | - | - | - | - |
| 8 | ಸಾಮಾನ್ಯ | 1 | - | 3 | - | 2 | 1 | - | 7 |
| | ಒಟ್ಟು | **1** | **-** | **3** | **-** | **3** | **1** | **-** | **8** |

**ಮೀಸಲಾತಿ ವರ್ಗೀಕರಣ (ರೋಸ್ಟರ್ ಬಿಂದು 89 ರಿಂದ 100 ಹಾಗೂ 1 ರಿಂದ 38)**

| ಕ್ರ ಸಂ: | ಮೀಸಲಾತಿ | ಇತರೆ | ಕನ್ನಡ ಮಾಧ್ಯಮ | ಮಹಿಳೆ | ಯೋಜನಾ ನಿರಾಶ್ರಿತರು | ಗ್ರಾಮೀಣ | ಮಾಜಿ ಸೈನಿಕರು | ಅಂಗವಿಕಲ | ಒಟ್ಟು |
|---|---|---|---|---|---|---|---|---|---|
| 1 | 2 | 3 | 4 | 5 | 6 | 7 | 8 | 9 | 10 |
| 1 | ಪ.ಜಾತಿ | 1 | 1 | 2 | - | 3 | 1 | - | 8 |
| 2 | ಪ.ಪಂ | 1 | - | 1 | - | - | - | - | 2 |
| 3 | ಪ್ರ.ವ-1 | - | - | - | - | 1 | 1 | - | 2 |
| 4 | ಪ್ರವ-2(ಎ) | 1 | 1 | 3 | - | 2 | 1 | - | 8 |
| 5 | ಪ್ರವ-2(ಬಿ) | - | - | - | - | 1 | 1 | - | 2 |
| 6 | ಪ್ರವ-3(ಎ) | - | - | 1 | - | 1 | - | - | 2 |
| 7 | ಪ್ರವ-3(ಬಿ) | 1 | - | 1 | - | - | - | - | 2 |
| 8 | ಸಾಮಾನ್ಯ | 4 | 1 | 9 | 2 | 6 | 2 | 1 | 25 |
| | ಒಟ್ಟು | **8** | **3** | **17** | **2** | **14** | **6** | **1** | **51** |

-3

**ವಯೋಮಿತಿ:**

**ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಯು**

- ಕನಿಷ್ಠ 18 ವರ್ಷ ವಯಸ್ಸನ್ನು ಪೂರೈಸಿರತಕ್ಕದ್ದು.
- ಗರಿಷ್ಠ ವಯೋಮಿತಿ.

| | |
|---|---|
| ಸಾಮಾನ್ಯ ವರ್ಗ | 35 ವರ್ಷ |
| 2ಎ, 2ಬಿ. 3ಎ, 3ಬಿ | 38 ವರ್ಷ |
| ಪ.ಜಾತಿ/ಪ.ಪಂಗಡ ಪ್ರ-1 | 40 ವರ್ಷ |
| ವಿಧವೆಯರು/ಅಂಗವಿಕಲರು | ಚಾಲ್ತಿಯಲ್ಲಿ ನಿಗದಿಪಡಿಸಿರುವ ವಯೋಮಿತಿಗೆ 10 ವರ್ಷ ಹೆಚ್ಚಿಗೆ ಸೇರಿಸಿಕೊಳ್ಳಲಾಗುವುದು. |
| ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ ಅವನು/ಅವಳು ಕೇಂದ್ರ ಸಶಸ್ತ್ರ ದಳದಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವರೋ ಅಷ್ಟು ವರ್ಷಗಳಿಗೆ 3 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು. | |

ಜನ್ಮ ದಿನಾಂಕದ ಬಗ್ಗೆ ಎಸ್.ಎಸ್.ಎಲ್.ಸಿ ಅಂಕಪಟ್ಟಿ ಅಥವಾ ವರ್ಗಾವಣೆ ಪ್ರಮಾಣ ಪತ್ರವನ್ನು ಮಾತ್ರ ಪರಿಗಣಿಸಲಾಗುವುದು. ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ)1977ರ ನಿಯಮ 6ರಂತೆ ಸಂಬಂಧಪಟ್ಟ ಪೂರಕ ದಾಖಲೆ ಒದಗಿಸಿದ್ದಲ್ಲಿ ಗರಿಷ್ಟ ವಯೋಮಿತಿ ಹೆಚ್ಚಿಸಲು ಅವಕಾಶ ವಿರುತ್ತದೆ.

**ಅರ್ಜಿ ಸಲ್ಲಿಸಲು ನಿಗಧಿ ಪಡಿಸಿರುವ ಶುಲ್ಕ**

| ಕ್ರ.ಸಂ | ಮೀಸಲಾತಿ ವರ್ಗ | ಶುಲ್ಕ | ಪಾವತಿಸುವ ವಿಧಾನ |
|---|---|---|---|
| 1 | ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಮಹಿಳೆ | ರೂ.100/- | ಆನ್‌ಲೈನ್/ಡೆಬಿಟ್‌ಕಾರ್ಡ್/ಕ್ರೆಡಿಟ್ ಕಾರ್ಡ್/ ಚಲನ್ ಹಾಗೂ ಇತ್ಯಾದಿಗಳ ಮೂಲಕ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಶಾಖೆ ಯಲ್ಲಿ ಆನ್‌ಲೈನ್ ಮೂಲಕ ಜಮಾ ಮಾಡತಕ್ಕದ್ದು. |
| 2 | ಸಾಮಾನ್ಯ/ಇತರೆ ಹಿಂದುಳಿದ ವರ್ಗಗಳು | ರೂ.200/- | |

**ಅರ್ಜಿ ಸಲ್ಲಿಸುವ ವಿಧಾನ:**

- ಅರ್ಜಿಗಳನ್ನು ಆನ್‌ಲೈನ್ (ON LINE) ಮೂಲಕ ಮಾತ್ರ ಸಲ್ಲಿಸತಕ್ಕದ್ದು. ಖುದ್ದಾಗಿ ಅಥವಾ ಅಂಚೆ ಅಥವಾ ಕೊರಿಯರ್ ಅಥವಾ ಪ್ರತ್ಯೇಕವಾಗಿ ಸಲ್ಲಿಸಲು ಅವಕಾಶ ವಿರುವುದಿಲ್ಲ.
- ಅಭ್ಯರ್ಥಿಗಳು ಅರ್ಜಿಗಳನ್ನು ಆನ್‌ಲೈನ್ ಮೂಲಕ ಕಚೇರಿಯ ಅಧಿಕೃತ ವೆಬ್‌ಸೈಟ್ http://chitradurga-va.kar.nic.in ಮೂಲಕವೇ ಸಲ್ಲಿಸುವುದು. ಆನ್‌ಲೈನ್ ಮೂಲಕ ದಿ:22-1-2020 ರಿಂದ ದಿ21-2-2020 ರವರೆಗೆ ಅರ್ಜಿಗಳನ್ನು ಸಲ್ಲಿಸಲು ಅವಕಾಶವಿರುತ್ತದೆ. ನಿಗಧಿಪಡಿಸಿದ ದಿನಾಂಕದೊಳಗೆ ಅರ್ಜಿಯನ್ನು ಸಲ್ಲಿಸತಕ್ಕದ್ದು.
- ವೆಬ್‌ಸೈಟ್‌ನಲ್ಲಿ ಲಭ್ಯವಿರುವ ಅರ್ಜಿಯನ್ನು ಭರ್ತಿ ಮಾಡಿದ ನಂತರ "ಎಸ್‌ಬಿಐ ಕಲೆಕ್ಟ್" ಮುಖಾಂತರ ಅರ್ಜಿಯ ಶುಲ್ಕವನ್ನು ಆನ್‌ಲೈನ್ ಮೂಲಕ ಪಾವತಿಸುವುದು.

- ಅಭ್ಯರ್ಥಿಗಳು ಅರ್ಜಿ ಶುಲ್ಕವನ್ನು ದಿ:25-2-2020 ರವರೆಗೆ ಪಾವತಿಸಲು ಅವಕಾಶವನ್ನು ಕಲ್ಪಿಸಲಾಗಿರುತ್ತದೆ. ತದನಂತರ ಅರ್ಜಿ ಶುಲ್ಕ ಪಾವತಿಸಲು ಅವಕಾಶವಿರುವುದಿಲ್ಲ.
- ಸಲ್ಲಿಸಿರುವ ಅರ್ಜಿ ಶುಲ್ಕವನ್ನು ಯಾವುದೇ ಕಾರಣಕ್ಕೂ ಹಿಂದಿರುಗಿಸಲಾಗುವುದಿಲ್ಲ ಹಾಗೂ ಬೇರೆ ಯಾವುದೇ ಇತರೆ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ.

**ಅರ್ಹತಾ ಷರತ್ತುಗಳು:**

- ಅಭ್ಯರ್ಥಿಯು ಭಾರತೀಯ ನಾಗರೀಕನಾಗಿರತಕ್ಕದ್ದು.
- **ಶೈಕ್ಷಣಿಕ ವಿದ್ಯಾರ್ಹತೆಯನ್ನು ಕರ್ನಾಟಕ ರಾಜ್ಯದಲ್ಲಿ ಪೂರೈಸಿರಬೇಕು.ಇತರೆ ರಾಜ್ಯಗಳ ಶಿಕ್ಷಣ ಮಂಡಳಿಗಳಿಂದ ಪಡೆದ ವಿದ್ಯಾರ್ಹತೆ ಅಥವಾ ಅಂಕಪಟ್ಟಿಗಳನ್ನು ಪರಿಗಣಿಸಲಾಗುವುದಿಲ್ಲ.**
- ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು.
- ಅಭ್ಯರ್ಥಿಯ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವವಿರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತರಾಗಿರಬೇಕು.
- ನೈತಿಕ ದುರ್ನಡತೆಯಿಂದಾಗಿ/ನೀತಿ ಬಾಹಿರ ಚಟುವಟಿಕೆಗಳಿಂದಾಗಿ ನ್ಯಾಯಾಲಯದಿಂದ ಶಿಕ್ಷೆಗೊಳ ಪಟ್ಟಿರುವ ವ್ಯಕ್ತಿ ಅಥವಾ ರಾಜ್ಯ/ಕೇಂದ್ರ/ಸ್ಥಳಿಯ ಸಂಸ್ಥೆ ಕಚೇರಿಗಳಲ್ಲಿ ನೈತಿಕ ದುರ್ನಡತೆಯಿಂದಾಗಿ ಅಥವಾ ನಿಯಮ ಬಾಹಿರ ಚಟುವಟಿಕೆಗಳಲ್ಲಿ ಒಳಗಾಗಿ ಆಯ್ಕೆಯಾದ ಅಭ್ಯರ್ಥಿಯು ಬದಲಿಯಾಗಿ ಕಾರ್ಯನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಕಾನೂನು ಬಾಹಿರ/ನೀತಿ ಬಾಹಿರ ಚಟುವಟಿಕೆಗಳಲ್ಲಿ ತೊಡಗಿ ಸೇವೆಯಿಂದ ತೆಗೆದು ಹಾಕಿದ್ದಲ್ಲಿ/ವಜಾ ಮಾಡಲ್ಪಟ್ಟಿದ್ದು ಕಂಡು ಬಂದಲ್ಲಿ ನೇಮಕಾತಿಗೆ ಅನರ್ಹರಾಗಿರುತ್ತಾರೆ.
- ದೈಹಿಕವಾಗಿ ಅನರ್ಹರಾಗಿದ್ದರೆಂಬುದಾಗಿ ವೈದ್ಯಕೀಯ ಮಂಡಳಿಯ ವರದಿಯ ಮೇಲೆ ಅನರ್ಹ ರೆಂಬುದಾಗಿ ತಿರಸ್ಕರಿಸುವ ಪೂರ್ಣ ವಿವೇಚನೆಯನ್ನು ರಾಜ್ಯ ಸರ್ಕಾರವು(ಈ ನೇಮಕಾತಿ ಪ್ರಾಧಿಕಾರವು)ಕಾಯ್ದಿರಿಸಿಕೊಂಡಿದೆ.

**ಜಾತಿ ಮೀಸಲಾತಿ ಪ್ರಮಾಣ ಪತ್ರಗಳು:**

- ಪ.ಜಾತಿ/ಪ.ಪಂಗಡ ಅಭ್ಯರ್ಥಿಗಳು ನಮೂನೆ 'ಡಿ'
- ಪ್ರವರ್ಗ-1 ಅಭ್ಯರ್ಥಿಗಳು ನಮೂನೆ 'ಇ'
- ಪ್ರವರ್ಗ-2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ನಮೂನೆ 'ಎಫ್'

ಈ ಪ್ರಮಾಣಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿ:21-2-2020ರ ಒಳಗೆ ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ಪಡೆದಿರಬೇಕು ಹಾಗೂ ಇದರ ದೃಢೀಕೃತ ನಕಲನ್ನು ಅರ್ಜಿ ಯೊಂದಿಗೆ ಮೂಲ ದಾಖಲಾತಿ ಪರಿಶೀಲನಾ ಸಮಯದಲ್ಲಿ ಸಲ್ಲಿಸಬೇಕು.

**ಪರಿಶೀಲನೆಗೆ ಹಾಜರುಪಡಿಸಬೇಕಾದ ಮೂಲ/ದೃಢಿಕೃತ ಪ್ರಮಾಣ ಪತ್ರಗಳು:**

- ದ್ವಿತೀಯ ಪಿ.ಯು.ಸಿ ಅಥವಾ ಸಿ.ಬಿ.ಎಸ್.ಇ ಅಥವಾ ಐ.ಸಿ.ಎಸ್.ಇ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿದ ಅಂಕಪಟ್ಟಿಗಳು.
- ಜನ್ಮ ದಿನಾಂಕದ ಬಗ್ಗೆ ಎಸ್.ಎಸ್.ಎಲ್.ಸಿ ಅಂಕ ಪಟ್ಟಿ ಅಥವಾ ವರ್ಗಾವಣೆ ಪ್ರಮಾಣ ಪತ್ರ.
- ಕಂಪ್ಯೂಟರ್ ಸಾಮಾನ್ಯ ಜ್ಞಾನ ಹೊಂದಿರುವ ಬಗ್ಗೆ ಪ್ರಮಾಣ ಪತ್ರ.

- ಸೇವೆಯಲ್ಲಿರುವ ನೌಕರರು ಸದರಿ ಹುದ್ದೆಗೆ ಅರ್ಜಿ ಸಲ್ಲಿಸುವ ಬಗ್ಗೆ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಸಂಬಂಧಿಸಿದ ನೇಮಕಾತಿ ಪ್ರಾಧಿಕಾರದಿಂದ ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಅಂತಿಮ ದಿನಾಂಕದೊಳಗೆ ಪಡೆದಿರತಕ್ಕದ್ದು.
- ಜಾತಿ ಮೀಸಲಾತಿ ಕೋರಿರುವ ಅಭ್ಯರ್ಥಿಗಳು ತಹಶೀಲ್ದಾರರಿಂದ ಪಡೆದ ಆದಾಯ ಮತ್ತು ಜಾತಿ ಪ್ರಮಾಣ ಪತ್ರ.
- ಮಾಜಿ ಸೈನಿಕ ಅಭ್ಯರ್ಥಿಗಳು ಸೇವೆಯಿಂದ ಬಿಡುಗಡೆಯಾದ ಪ್ರಮಾಣ ಪತ್ರ (**ಅರ್ಜಿ ಸಲ್ಲಿಸಲು ನಿಗಧಿಪಡಿಸಿರುವ ಅಂತಿಮ ದಿನಾಂಕಕ್ಕೆ ನಿವೃತ್ತಿ ಹೊಂದಿರುವವರು ಮಾತ್ರ ಅರ್ಹರಿರುತ್ತಾರೆ.**)

**ಗ್ರಾಮೀಣ ಅಭ್ಯರ್ಥಿಗಳು:**

- ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಪ್ರಸ್ತುತ ಚಾಲ್ತಿಯಲ್ಲಿರುವ ನಿಯಮಗಳ ರೀತ್ಯಾ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ 1 ರಿಂದ 10 ನೇ ತರಗತಿಯವರೆಗೆ ವ್ಯಾಸಂಗ ಮಾಡಿ ಉತ್ತೀರ್ಣರಾಗಿರಬೇಕು. ಅಂತಹ ಅಭ್ಯರ್ಥಿಗಳು ಮೀಸಲಾತಿಯನ್ನು ಅರ್ಹರಿರುತ್ತಾರೆ.
- ಗ್ರಾಮೀಣ ಮೀಸಲಾತಿ ಕೋರುವ ಪ.ಜಾತಿ/ಪ.ಪಂಗಡ, ಪ್ರವರ್ಗ-1, ಪ್ರವರ್ಗ-2ಎ, 2ಬಿ, 3ಎ, 3ಬಿ ಮೀಸಲಾತಿಗೆ ಸೇರಿದ ಅಭ್ಯೈರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ನಮೂನೆ-2 ರಲ್ಲಿ ಶಾಲಾ ಮುಖ್ಯೋಪಾಧ್ಯಾಯರಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಧಿಕಾರಿಗಳ ಮೊಹರು ಹಾಗು ಮೇಲುರುಜು ಮಾಡಿಸಿಕೊಂಡು ಅದರ ದೃಢಿಕೃತ/ಮೂಲ ಪ್ರತಿಯೊಂದಿಗೆ ಪರಿಶೀಲನಾ ಸಮಯದಲ್ಲಿ ಸಲ್ಲಿಸತಕ್ಕದ್ದು.
- ಗ್ರಾಮೀಣ ಅಭ್ಯರ್ಥಿಗಳೆಂದು ಮೀಸಲಿಸಿದ ಹುದ್ದೆಗಳನ್ನು ಕ್ಲೇಮ್ ಮಾಡುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ನಮೂನೆ ಪ್ರಮಾಣ ಪತ್ರದ ಜೊತೆಗೆ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ-1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿಸಿದ ತಹಶೀಲ್ದಾರರಿಂದ ಪಡೆದು ಅದರ ದೃಢೀಕೃತ ಪ್ರತಿಯನ್ನು ಪರಿಶೀಲನಾ ಸಮಯದಲ್ಲಿ ಸಲ್ಲಿಸತಕ್ಕದ್ದು. ಮೀಸಲಾತಿಯ ಪ್ರಮಾಣ ಪತ್ರವು ತಿರಸ್ಕೃತಗೊಂಡಲ್ಲಿ ಅಂತಹ ಅಭ್ಯರ್ಥಿಗಳು ಗ್ರಾಮೀಣ ಮೀಸಲಾತಿಗೆ ಅನರ್ಹರಾಗುತ್ತಾರೆ.
- ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು 1 ರಿಂದ 10ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಮೊಹರಿನೊಂದಿಗೆ ಪಡೆದ ಪ್ರಮಾಣ ಪತ್ರಗಳನ್ನು ಪರಿಶೀಲನಾ ಸಮಯದಲ್ಲಿ ಸಲ್ಲಿಸತಕ್ಕದ್ದು.
- ಯೋಜನೆಗಳಿಂದ ನಿರಾಶ್ರಿತರಾದ ಕುಟುಂಬದ ಅಭ್ಯರ್ಥಿಗಳು ತಹಶೀಲ್ದಾರರಿಂದ ನಿಗಧಿತ ನಮೂನೆಯಲ್ಲಿ ಪಡೆದ ಯೋಜನಾ ನಿರಾಶ್ರಿತರ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.

**ಅಂಗವಿಕಲ ಮೀಸಲಾತಿ.**

ಸರ್ಕಾರದ ಅಧಿಸೂಚನೆ ಸಂ:ಡಿಪಿಎಆರ್ 54 ಎಸ್ಆರ್ಆರ್ 2012 ದಿ:23-6-2012 ರ ರೀತ್ಯಾ ಗ್ರಾಮಲೆಕ್ಕಿಗರ ಹುದ್ದೆಗಳಲ್ಲಿ ಅಂಗವಿಕಲರ ಮೀಸಲಾತಿಯನ್ನು ಈ ಕೆಳಕಂಡ ವರ್ಗಗಳಿಗೆ ಮಾತ್ರ ಕಲ್ಪಿಸಲಾಗಿದೆ. ಇತರೆ ದೈಹಿಕ ಅಂಗವಿಕಲತೆಯುಳ್ಳ ಅಭ್ಯರ್ಥಿಗಳು ಸದರಿ ಹುದ್ದೆಗೆ ಅರ್ಜಿ ಸಲ್ಲಿಸಲು ಅರ್ಹರಿರುವುದಿಲ್ಲ.

-6

- ಕುಷ್ಠ ರೋಗದಿಂದ ಗುಣಮುಖರಾದವರು (Leprosy Cured)
- ಶ್ರವಣ ದೋಷವುಳ್ಳವರು (Hearing Impaired)
- ಮಾನಸಿಕ ಅಸ್ವಸ್ಥತೆಯಿಂದ ಗುಣಮುಖರಾದವರು (Mentally ill)
- ದೈಹಿಕ ಅಂಗವಿಕಲತೆಯುಳ್ಳವರು (Loco Motor Disability)

ಸರ್ಕಾರದ ಅಧಿಕೃತ ಜ್ಞಾಪನ ಪತ್ರ ಸಂ:ಸಿಆಸುಇ 128 ಸೇನೆನಿ 2005 ದಿ:19-11-2005 ರಲ್ಲಿ ನಿಗಧಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ ಸಂಬಂಧಪಟ್ಟ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯು ನೀಡುವ ಪ್ರಮಾಣ ಪತ್ರವನ್ನು ಪಡೆದು, ಪರಿಶೀಲನಾ ಸಮಯದಲ್ಲಿ ಸಲ್ಲಿಸತಕ್ಕದ್ದು. ಹಾಗೂ ಬೇರೆ ಯಾವುದೇ ನಮೂನೆಗಳಲ್ಲಿ ಪಡೆಯಲಾಗಿರುವ ಪ್ರಮಾಣ ಪತ್ರಗಳನ್ನು ಪರಿಗಣಿಸ ಲಾಗುವುದಿಲ್ಲ.

**ವಿಶೇಷ ಸೂಚನೆ: ಅಂಗವಿಕಲ ಮೀಸಲಾತಿಯಲ್ಲಿ ಆಯ್ಕೆಯನ್ನು ಮೆರಿಟ್ ಮತ್ತು ಅಂಗವಿಕಲತೆ ಆಧಾರದಡಿ ಆಯ್ಕೆ ಮಾಡಲಾಗುವುದು.**

**ಇತರೆ ಸೂಚನೆಗಳು;**

- ಅಭ್ಯರ್ಥಿಗಳು ಆಯ್ಕೆ ಬಗ್ಗೆ ಪ್ರಚಾರ ಅಥವಾ ಶಿಫಾರಸ್ಸು ಮಾಡಿದಲ್ಲಿ ಅಂತಹವರ ಅರ್ಜಿಗಳನ್ನು ತಿರಸ್ಕರಿಸಲಾಗುವುದು.
- ಅಭ್ಯರ್ಥಿಗಳಿಗೆ ನೇಮಕಾತಿ ಸಂಬಂಧ ಯಾವುದೇ ಪತ್ರ ವ್ಯವಹಾರಕ್ಕೆ ಅವಕಾಶ ಇರುವುದಿಲ್ಲ. ಅಭ್ಯರ್ಥಿಗಳು ಆನ್‌ಲೈನ್‌ನಲ್ಲೇ ಮಾಹಿತಿ ಪಡೆದು ಪರಿಶೀಲನಾ ದಿನಾಂಕದಂದು ಸಂಬಂಧಿಸಿದ ಮೂಲ/ದೃಢೀಕೃತ ದಾಖಲೆಗಳೊಂದಿಗೆ ಹಾಜರಾಗತಕ್ಕದ್ದು.
- ಪರಿಶೀಲನಾ ದಿನಂಕದಂದು ಗೈರುಹಾಜರಾದರೇ ಅಥವಾ ಮೂಲ ದಾಖಲಾತಿಗಳನ್ನು ಹಾಜರು ಪಡಿಸದೇ ಇರುವ ಅಭ್ಯರ್ಥಿಗಳ ಅರ್ಜಿಯನ್ನು ಯಾವುದೇ ಸೂಚನೆ ನೀಡದೇ ತಿರಸ್ಕೃತ ಗೊಳಿಸಲಾಗುವುದು.
- **ಆಯ್ಕೆಯನ್ನು ಅಭ್ಯರ್ಥಿಯ ಮೆರಿಟ್ ಮತ್ತು ರೋಸ್ಟರ್ ಆಧಾರದ ಮೇಲೆ ಮಾತ್ರ ಪರಿಗಣಿಸ ಲಾಗುವುದು.**
- ಜಾತಿ ಮೀಸಲಾತಿಯಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು ಜಾತಿ ಪ್ರಮಾಣ ಪತ್ರದ ಬಗ್ಗೆ ಸಂಬಂಧಿಸಿದ ಜಿಲ್ಲಾಧಿಕಾರಿಗಳಿಂದ (ಅಧ್ಯಕ್ಷರು, ಜಾತಿ ಮತ್ತು ಆದಾಯ ಪರಿಶೀಲನಾ ಸಮಿತಿ) ಸಿಂಧುತ್ವ ಪ್ರಮಾಣ ಪತ್ರ ಪಡೆದ ನಂತರ ನೇಮಕಾತಿ ಆದೇಶ ನೀಡಲಾಗುವುದು.
- ನೇಮಕಾತಿ ಬಗ್ಗೆ ಅಂತಿಮ ತೀರ್ಮಾನವನ್ನು ನೇಮಕಾತಿ ಪ್ರಾಧಿಕಾರಿಯಾದ ಜಿಲ್ಲಾಧಿಕಾರಿ, ಚಿತ್ರದುರ್ಗ ಇವರು ಕಾಯ್ದಿರಿಸಿಕೊಂಡಿರುತ್ತಾರೆ.
- ಅರ್ಜಿಗಳನ್ನು ಸ್ವೀಕರಿಸಲು ನಿಗಧಿಪಡಿಸಿರುವ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮರುದಿನವು ಅರ್ಜಿಗಳನ್ನು ಆನ್‌ಲೈನ್ ಮೂಲಕ ಸಲ್ಲಿಸಲು ಕೊನೆಯ ದಿನಾಂಕವಾಗುವುದು.
- ಅಧಿಸೂಚನೆಯ ಕೊನೆಯ ದಿ:21-2-2020ರ ಒಳಗಾಗಿ ನಿಗಧಿಪಡಿಸಿದ ಎಲ್ಲಾ ಪ್ರಮಾಣ ಪತ್ರಗಳನ್ನು ಸಕ್ಷಮ ಪ್ರಾಧಿಕಾರದಿಂದ ಕಡ್ಡಾಯವಾಗಿ ಪಡೆದುಕೊಂಡಿರಬೇಕು.

-7

- ಆಯ್ಕೆಯು ಸರ್ಕಾರದಿಂದ ಕಾಲಕಾಲಕ್ಕೆ ಹೊರಡಿಸುವ ನಿಯಮಗಳಿಗೆ ಒಳಪಟ್ಟಿರುತ್ತದೆ.
- ಅರ್ಜಿಯಲ್ಲಿ ತಪ್ಪು/ಸುಳ್ಳು ಮಾಹಿತಿ ನೀಡಿ ಉದ್ಯೋಗ ಪಡೆಯುವ ಅಭ್ಯರ್ಥಿಗಳ ನೇಮಕಾತಿಯನ್ನು ವಜಾಗೊಳಿಸುವುದಲ್ಲದೇ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು.

(ಆರ್.ವಿನೋತ್ ಪ್ರಿಯಾ)
ಜಿಲ್ಲಾಧಿಕಾರಿಗಳು,
ಚಿತ್ರದುರ್ಗ ಜಿಲ್ಲೆ.

<u>ಪ್ರತಿಯನ್ನು:</u>

1. ಸಂಕಲನಾಧಿಕಾರಿಗಳು, ಹೊರವಲಯ ಮುದ್ರಾಣಾಲಯ, ಮೈಸೂರು ರಸ್ತೆ, ಆರ್. ವಿ. ಕಾಲೇಜು ಅಂಚೆ, ಬೆಂಗಳೂರು, ಇವರಿಗೆ ಕಳುಹಿಸುತ್ತಾ, ಸದರಿ ಅಧಿಸೂಚನೆಯನ್ನು ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಿ ರಾಜ್ಯಪತ್ರದ 50 ಪ್ರತಿಗಳನ್ನು ಈ ಕಚೇರಿಗೆ ಕಳುಹಿಸಲು ಕೋರಿದೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
3. ಪ್ರಾದೇಶಿಕ ಆಯುಕ್ತರು, ಬೆಂಗಳೂರು ವಿಭಾಗ, ಬೆಂಗಳೂರು ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
4. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳಿಗೆ, ತಮ್ಮ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
5. ಹಿರಿಯ ತಾಂತ್ರಿಕ ನಿರ್ದೇಶಕರು/ಜಿಲ್ಲಾ ಸೂಚನಾ ವಿಜ್ಞಾನಿಗಳು, ರಾಷ್ಟ್ರೀಯ ವಿಜ್ಞಾನ ಸೂಚನಾ ಕೇಂದ್ರ, ಜಿಲ್ಲಾಧಿಕಾರಿಗಳ ಕಚೇರಿ, ಚಿತ್ರದುರ್ಗ ಇವರಿಗೆ ಕಳುಹಿಸುತ್ತಾ ಅಧಿಸೂಚನೆಯನ್ನು ವೆಬ್ ಸೈಟ್‌ನಲ್ಲಿ ಪ್ರಕಟಿಸಲು ಕೋರಿದೆ.
6. ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್,ಚಿತ್ರದುರ್ಗ ಇವರಿಗೆ ತಮ್ಮ ಕಚೇರಿಯ ಸೂಚನಾಫಲಕದಲ್ಲಿ ಪ್ರಕಟಿಸಲು ಕೋರಿದೆ.
7. ವ್ಯವಸ್ಥಾಪಕರು, ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಜೆ.ಸಿ.ಆರ್ ಬಡಾವಣೆ ಶಾಖೆ, ಚಿತ್ರದುರ್ಗ ಇವರಿಗೆ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
8. ಉಪವಿಭಾಗಾಧಿಕಾರಿಗಳು, ಚಿತ್ರದುರ್ಗ ಉಪವಿಭಾಗ, ಇವರಿಗೆ ತಮ್ಮ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.
9. ಜಿಲ್ಲೆಯ ಎಲ್ಲಾ ತಹಶೀಲ್ದಾರ್ ರವರಿಗೆ ಕಳುಹಿಸುತ್ತಾ, ತಮ್ಮ ಕಚೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ಕೋರಿದೆ.